(188)

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ, ಶ್ರೀ ಕೆ.ಟಿ. ಶ್ರೀಕಂಠೇಗೌಡ, ಶ್ರೀ ಯು.ಬಿ ವೆಂಕಟೇಶ್, ಶ್ರೀ ಎಸ್.ಎಲ್. ಬೋಜೇಗೌಡ, ಶ್ರೀ ಎಸ್.ರವಿ ಹಾಗೂ ಶ್ರೀ ಪಿ.ಆರ್. ರಮೇಶ್ ಇವರ ನಿಯಮ 72ರಡಿಯಲ್ಲಿ ನೀಡಿರುವ ಸೂಚನೆಗೆ ಹೇಳಿಕೆ

## ಸೂಚನೆ

ಇತ್ತೀಚಿನ ದಿನಪತ್ರಿಕೆಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯವೈಖರಿಯ ಬಗ್ಗೆ ಅಪಸ್ವರದ ವರದಿಗಳು ಪ್ರಕಟವಾಗುತ್ತಿದ್ದು, 2017-18ನೇ ಸಾಲಿನಲ್ಲಿ 106 ಕೆ.ಎ.ಎಸ್. ಅಧಿಕಾರಿಗಳ ನೇಮಕಾತಿ ಸೇರಿದಂತೆ ಮೌಲ್ಯಮಾಪನವನ್ನು ಸಕಾಲಕ್ಕೆ ನಡೆಸದೇ ಇರುವುದು ಇನ್ನಿತರ ವಿಚಾರಗಳು ಸೇರಿದಂತೆ ಸಾರ್ವಜನಿಕ ವಲಯದಲ್ಲಿ ಸಾಕಷ್ಟು ಚರ್ಚೆಗೆ ಅವಕಾಶ ಮಾಡಿಕೊಟ್ಟಿರುವ ವಿಷಯವನ್ನು ನಿಯಮ 72ರ ಅಡಿಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯ ಬಯಸುತ್ತೇನೆ.

***

## ಹೇಳಿಕೆ

ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕೈಗೊಳ್ಳುತ್ತಿದ್ದು, ಈ ಬಗ್ಗೆ ಇತ್ತೀಚಿನ ದಿನಪತ್ರಿಕೆಗಳಲ್ಲಿ ಆಯೋಗದ ಕಾರ್ಯವೈಖರಿಯ ಕುರಿತು ಅಪಸ್ವರದ ವರದಿಗಳು ಪ್ರಕಟವಾಗುತ್ತಿದೆ ಎಂದು ತಿಳಿಸಲಾಗಿದೆ. ದಿನಪತ್ರಿಕೆಗಳಲ್ಲಿ ಪ್ರಕಟವಾಗುತ್ತಿರುವ ಬಹುತೇಕ ವರದಿಗಳು ಆಧಾರರಹಿತ ವರದಿಗಳಾಗಿದ್ದು, ಸದರಿ ವರದಿಗಳ ಕುರಿತಂತೆ ಕಾಲಕಾಲಕ್ಕೆ ಆಯೋಗದ ವತಿಯಿಂದಲೂ ಸಹ ದಿನಪತ್ರಿಕೆಗಳಿಗೆ ಸ್ಪಷ್ಟೀಕರಣಗಳನ್ನು ನೀಡಲಾಗಿರುತ್ತದೆ.

ಇದಲ್ಲದೇ 2017-18ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ (106) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, ಮೌಲ್ಯಮಾಪನವನ್ನು ಸಕಾಲಕ್ಕೆ ನಡೆಸದೇ ಇರುವ ಬಗ್ಗೆ ಪ್ರಸ್ತಾಪಿಸಿದ್ದು, ಈ ಸಂಬಂಧ ಈ ಕೆಳಕಂಡಂತೆ ಮಾಹಿತಿ ನೀಡಲಾಗಿದೆ.

- ಆಯೋಗವು ದಿನಾಂಕ: 31.01.2020 ರಂದು 2017-18ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿಯ ಹುದ್ದೆಗಳಿಗೆ ಅಧಿಸೂಚನೆಯನ್ನು ಹೊರಡಿಸಿದ್ದು, ಸದರಿ ಅಧಿಸೂಚನೆಯಲ್ಲಿ ಪೂರ್ವಭಾವಿ ಪರೀಕ್ಷೆಯನ್ನು ದಿನಾಂಕ: 17.05.2020ರಂದು ಮತ್ತು ಮುಖ್ಯ ಪರೀಕ್ಷೆಯನ್ನು 2020ರ ಆಗಸ್ಟ್/ಸೆಪ್ಟೆಂಬರ್ ಮಾಹೆಯಲ್ಲಿ ನಡೆಸಲು ನಿಗದಿಪಡಿಸಲಾಗಿತ್ತು. ಆದರೆ, ಕೋವಿಡ್ ಸಾಂಕ್ರಾಮಿಕ ರೋಗದ ಮೊದಲನೇ ಅಲೆಯ ಪ್ರಯುಕ್ತ ಸರ್ಕಾರವು ಲಾಕ್‌ಡೌನ್ ಘೋಷಿಸಿದ್ದರಿಂದ, ಸದರಿ ಪರೀಕ್ಷೆಗಳನ್ನು ಅಧಿಸೂಚನೆಯಲ್ಲಿ ನಿಗದಿಪಡಿಸಿದಂತೆ ಕೈಗೊಳ್ಳಲು ಸಾಧ್ಯವಾಗಲಿಲ್ಲ.

- ಈ ಸಂಬಂಧ ದಿನಾಂಕ: 24.08.2020ರಂದು ಪೂರ್ವಭಾವಿ ಪರೀಕ್ಷೆಗಳನ್ನು ನಡೆಸಲಾಗಿದ್ದು, ಸದರಿ ಪರೀಕ್ಷೆಯಲ್ಲಿಯೂ ಸಹ ಕೋವಿಡ್ ಪಾಸಿಟಿವ್ ಅಭ್ಯರ್ಥಿಗಳಿಗೆ ಅವಕಾಶವನ್ನು ಕಲ್ಪಿಸಲಾಗಿತ್ತು. ತದನಂತರ ಜನವರಿ ತಿಂಗಳಲ್ಲಿ ಮುಖ್ಯ ಪರೀಕ್ಷೆಗಳನ್ನು ನಿಗದಿಪಡಿಸಿದ ಸಂದರ್ಭದಲ್ಲಿ, ಬಹುತೇಕ ಅಭ್ಯರ್ಥಿಗಳು ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸಲಾಗುತ್ತಿರುವ ಈ ಗೆಜೆಟೆಡ್ ಪ್ರೊಬೇಷನರ್ಸ್ ಪರೀಕ್ಷೆಗಳು ಕೇಂದ್ರ ಲೋಕಸೇವಾ ಆಯೋಗವು ನಿಗದಿಪಡಿಸಿರುವ ಪರೀಕ್ಷೆಗಳಿಗೆ ಬಹಳಷ್ಟು ಹತ್ತಿರವಾಗಿರುವುದರಿಂದ ತೊಂದರೆಯಾಗುತ್ತಿದೆ ಎಂದು ತಿಳಿಸುತ್ತಾ, ಸದರಿ ಪರೀಕ್ಷೆಗಳನ್ನು

ಮುಂದೂಡುವಂತೆ ಮನವಿಗಳನ್ನು ಸಲ್ಲಿಸಿದಿದ್ದರಿಂದ, ಮುಖ್ಯ ಪರೀಕ್ಷೆಗಳನ್ನು ದಿನಾಂಕ: 13.02.2021 ರಿಂದ 16.02.2021ರ ವರೆಗೆ ನಡೆಸಲಾಯಿತು.

- ಮೌಲ್ಯಮಾಪನ ಪ್ರಕ್ರಿಯೆಗೆ ಸಂಬಂಧಿಸಿದಂತೆ, ಆಯೋಗವು ಈಗಾಗಲೇ ವಿವರಣಾತ್ಮಕ ಉತ್ತರ ಪುಸ್ತಿಕೆಗಳನ್ನು ಗಣಕೀಕೃತ ಮೌಲ್ಯಮಾಪನ ವಿಧಿ-ವಿಧಾನಗಳಲ್ಲಿ ನಡೆಸಿಕೊಂಡು ಬರುತ್ತಿದ್ದು, ಈ ಸಂಬಂಧ ತನ್ನದೇ ಆದ ಒಂದು ತಂತ್ರಾಂಶವು ಇಲ್ಲದೇ ಇರುವುದರ ಹಿನ್ನೆಲೆಯಲ್ಲಿ, ಎನ್.ಐ.ಸಿ. ಸಂಸ್ಥೆಯ ವತಿಯಿಂದ ಮೌಲ್ಯಮಾಪನ ಪ್ರಕ್ರಿಯೆಯನ್ನು ಕೈಗೊಳ್ಳಲು ತೀರ್ಮಾನಿಸಲಾಗಿರುತ್ತದೆ.

- ಆದರೆ, ಈ ಸಂದರ್ಭದಲ್ಲಿ ಪುನಃ ರಾಜ್ಯದಲ್ಲಿ ಕೋವಿಡ್ ಎರಡನೇ ಅಲೆಯ ಹಿನ್ನೆಲೆಯಲ್ಲಿ, ಲಾಕ್‌ಡೌನ್ ಆದ ಪ್ರಯುಕ್ತ ಹಾಗೂ ಆಯೋಗದ ಬಹುತೇಕ ಅಧಿಕಾರಿ/ಸಿಬ್ಬಂದಿಗಳೂ ಸಹ ಕೋವಿಡ್ ಸೋಂಕಿಗೆ ಒಳಗಾದ ಹಿನ್ನೆಲೆಯಲ್ಲಿ, ಸಕಾಲದಲ್ಲಿ ಈ ಕಾರ್ಯವನ್ನು ಕೈಗೆತ್ತಿಕೊಳ್ಳಲು ಸಾಧ್ಯವಾಗಿರುವುದಿಲ್ಲ.

- ತದನಂತರ ಆಯೋಗದ ನಿರ್ಣಯದಂತೆ, ಮೌಲ್ಯಮಾಪನ ಪ್ರಕ್ರಿಯೆಯನ್ನು ನಡೆಸಲು ಆಯೋಗಕ್ಕೆ ಒಂದು ಸೂಕ್ತ ತಂತ್ರಾಂಶವನ್ನು ಅಭಿವೃದ್ಧಿಪಡಿಸಿಕೊಡುವಂತೆ ಎನ್.ಐ.ಸಿ ಸಂಸ್ಥೆಯವರನ್ನು ಸಂಪರ್ಕಿಸಲಾಗಿ, ಎನ್.ಐ.ಸಿ ಸಂಸ್ಥೆಯವರು ಸಹಮತಿ ನೀಡಿ, ಮೌಲ್ಯಮಾಪನ ಕಾರ್ಯಕ್ಕಾಗಿ ತಂತ್ರಾಂಶವನ್ನು ಅಭಿವೃದ್ಧಿಪಡಿಸಿ ನೀಡಿರುತ್ತಾರೆ.

- ಲಾಕ್‌ಡೌನ್ ಮುಕ್ತಾಯವಾದ ನಂತರ ಮೌಲ್ಯಮಾಪನ ಪ್ರಕ್ರಿಯೆಯನ್ನು ಪ್ರಾರಂಭಿಸಿದ್ದು, ಪ್ರಸ್ತುತ ಎನ್.ಐ.ಸಿ. ರವರು ಅಭಿವೃದ್ಧಿಪಡಿಸಿ ನೀಡಿರುವ ತಂತ್ರಾಂಶದ ಆಡಿಟ್ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮುಂದುವರೆದು, ಈಗಾಗಲೇ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಹುದ್ದೆಗಳಿಗೆ ಸದರಿ ತಂತ್ರಾಂಶವನ್ನು ಬಳಸಿಕೊಂಡು ಮೌಲ್ಯಮಾಪನ ಕಾರ್ಯವನ್ನು ಮುಕ್ತಾಯಗೊಳಿಸಲಾಗಿದ್ದು, ಅರ್ಹತಾ ಪಟ್ಟಿಯನ್ನು ಸಹ ಪ್ರಕಟಿಸಲಾಗಿದೆ. ಅದೇ ರೀತಿ, 2017-18ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ಮೌಲ್ಯಮಾಪನ ಕಾರ್ಯವನ್ನು ಸಹ ಕೈಗೆತ್ತಿಕೊಳ್ಳಲಾಗುತ್ತಿದೆ.

ಸಿಆಸುಇ 106 ಎಸ್‌ಎಸ್‌ಸಿ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ